# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1193

ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 29.12.2022

ಉತ್ತರಿಸುವವರು : ಸನ್ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರ ಅರಣ್ಯ ಪ್ರದೇಶಗಳ ಸರ್ವೆಗೆ ಬಿಡುಗಡೆ ಮಾಡಿರುವ Detected Project Reports of Light Detection and Ranging (LIDAR) ಅನುಷ್ಠಾನ ಯಾವ ಹಂತದಲ್ಲಿದೆ; (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಕೇಂದ್ರ ಸರ್ಕಾರವು ಅರಣ್ಯ ಪ್ರದೇಶಗಳ ಸರ್ವೆಯನ್ನು Detected Project Reports of Light Detection and Ranging (LIDAR) ಮುಖಾಂತರ ಅನುಷ್ಠಾನಗೊಳಿಸಲು ಬಾಗಲಕೋಟೆ ವಿಭಾಗದ ಜಮಖಂಡಿ ವಲಯದಲ್ಲಿ 8529.49 ಹೆಕ್ಟೇರ್ ಪ್ರದೇಶವನ್ನು ಆಯ್ಕೆ ಮಾಡಿ ಪ್ರದೇಶದಲ್ಲಿನ ಮಣ್ಣು ಮತ್ತು ಜಲ ಸಂರಕ್ಷಣಾ ಕಾಮಗಾರಿಗಳು ಒಳಗೊಂಡ ವಿವರವಾದ ಯೋಜನಾ ವರದಿಯನ್ನು ಪತ್ರ ಸಂಖ್ಯೆ:D.O.No:E13-3/2020-B-1(NAEB) ದಿನಾಂಕ: 20.01.2022 ರಂದು Government of India, Ministry of Environment, Forest and Climate Change, New Delhi ರವರು ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. |
| ಆ) | ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದ LIDAR ಯೋಜನೆ ಅನುಷ್ಠಾನವನ್ನು ಯಶಸ್ವಿಗೊಳಿಸಲು ಮೇಲಿಂದ ಮೇಲೆ ನಿರ್ದೇಶನ ನೀಡುತ್ತಿರುವುದು ನಿಜವೇ; ಹಾಗಿದ್ದಲ್ಲಿ ಈ ಬಗ್ಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ವಿವರ ನೀಡುವುದು) | ಯೋಜನಾ ವರದಿಯ ಪ್ರಕಾರ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ರೂ.52.82 ಕೋಟಿ ಅನುದಾನದ ಅವಶ್ಯಕತೆ ಇದ್ದು, ಸದರಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ದಿನಾಂಕ: 06.06.2022 ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |
| ಇ) | ರಾಜ್ಯದಲ್ಲಿ LIDAR ಯೋಜನೆ ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದಲ್ಲಿ, ಮಾನವ, ವನ್ಯಪ್ರಾಣಿಗಳ ನಡುವಿನ ಸಂಘರ್ಷ ತಗ್ಗಿಸಬಹುದೆಂಬ ಅಭಿಪ್ರಾಯ ಸರಿಯೇ (ಹಾಗಿದ್ದಲ್ಲಿ ಪೂರ್ಣ ವಿವರ ನೀಡುವುದು) | LIDAR ಯೋಜನೆಯು ಯಶಸ್ವಿಯಾಗಿ ವನ್ಯಜೀವಿ ಘಟಕದಲ್ಲಿ ಅನುಷ್ಠಾನಗೊಳಿಸಿದಲ್ಲಿ ಮಾನವ ವನ್ಯಪ್ರಾಣಿ ಸಂಘರ್ಷ ತಗ್ಗಿಸಬಹುದೆಂಬ ಅಭಿಪ್ರಾಯದ ಬಗ್ಗೆ ಖಚಿತತೆ ಇರುವುದಿಲ್ಲ.<br><br>ಪ್ರಸ್ತುತ ಕ್ಯಾಮರಾ ಟ್ರಾಪ್ ಹಾಗೂ ಡ್ರೋಣ್ ಗಳ ಆಧುನಿಕ ತಂತ್ರಜ್ಞಾನಗಳನ್ನು ಅನುಸರಿಸಿ ಮಾನವ-ವನ್ಯಪ್ರಾಣಿ ನಡುವಿನ ಸಂಘರ್ಷವನ್ನು ತಗ್ಗಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಅಪಜೀ 60 ಎಫ್ ಟಿಎಸ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ